**Akashvani : Bangalore**
**Regional Bulletin In Kannada**
**25.08.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ರಾಜ್ಯದ ೧೦೨ ತಾಲೂಕುಗಳಲ್ಲಿ ಬರಗಾಲ; ತಿಂಗಳಾಂತ್ಯಕ್ಕೆ ಕೇಂದ್ರಕ್ಕೆ ವರದಿ ಸಲ್ಲಿಕೆ - ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್**

**೨. ೫೨೮ ಗ್ರೇಡ್ ೧ ಕಾರ್ಯದರ್ಶಿಗಳಿಗೆ ಪಿಡಿಒ ಆಗಿ ಮುಂಬಡ್ತಿ ; ಗ್ರಾಮಗಳ ಅಭಿವೃದ್ಧಿಗೆ ಒತ್ತು ನೀಡುವಂತೆ ಸಚಿವ ಈಶ್ವರ್ ಬಿ ಖಂಡ್ರೆ ಕರೆ**

**೩. ಹನೂರು ಗುಂಡಿನ ದಾಳಿ ಪ್ರಕರಣ; ಸಿಐಡಿ ತನಿಖೆಗೆ ವರ್ಗಾಯಿಸಿ ಸರ್ಕಾರ ಆದೇಶ**

**೪. ಸಚಿವ ಬಿ.ನಾಗೇಂದ್ರ ವಿರುದ್ಧ ಬಳ್ಳಾರಿ ಚಲೋ; ಹತ್ತು ದಿನಗಳ ಕಾಲ ಪಾದಯಾತ್ರೆ ನಡೆಸಲು ಬಿಜೆಪಿ ನಿರ್ಧಾರ**

**೫. ಕೊಡಗಿನಲ್ಲಿ ಧಾರಾಕಾರ ಮಳೆ; ಭಾಗಮಂಡಲದಲ್ಲಿ ತ್ರಿವೇಣಿ ಸಂಗಮ ಮುಳುಗಡೆ**

**<><*<><>*><**

ರಾಜ್ಯದ ೧೦೨ ತಾಲೂಕುಗಳಲ್ಲಿ ಬರಗಾಲ ಉಂಟಾಗಿದ್ದು, ಈ ತಿಂಗಳ ಅಂತ್ಯಕ್ಕೆ ಕೇಂದ್ರ ಸರ್ಕಾರಕ್ಕೆ ಬರ ಕುರಿತ ವರದಿ ಸಲ್ಲಿಕೆ ಮಾಡಲಾಗವುದು ಎಂದು ಕಂದಾಯ ಸಚಿವ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿ ವಾರವೂ ಬರಗಾಲದ ಬಗ್ಗೆ ವಿಮರ್ಶೆ ನಡೆಸಲಾಗುತ್ತಿದ್ದು, ಸಂಪುಟ ಸಭೆಯಲ್ಲಿ ಚರ್ಚೆ ನಡೆಸಿ, ಬಳಿಕ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು. ಇಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕ್ಷೇತ್ರಗಳ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಶಾಸಕರೊಂದಿಗೆ ಸಭೆ ನಡೆಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಇದೇ ವೇಳೆ, ಹನೂರು ಗುಂಡಿನ ದಾಳಿ ಪ್ರಕರಣ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಇಂತಹ ಘಟನೆಗಳು ಸಂಭವಿಸಿದಾಗ ಸರ್ಕಾರಕ್ಕೆ ಅನುಮಾನ ಉಂಟಾದರೆ, ಸಿಐಡಿಗೆ ನೀಡಲಾಗುತ್ತದೆ ಎಂದು ಸಮರ್ಥಿಸಿಕೊಂಡಿದ್ದಾರೆ.

**<><*<><>*><**

ಗ್ರಾಮಗಳ ವಿಕಾಸವೇ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಪರಮ ಧ್ಯೇಯ ಮತ್ತು ಗುರಿಯಾಗಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ಕಚೇರಿಯಲ್ಲಿಂದು ಗ್ರೇಡ್ ೧ ಕಾರ್ಯದರ್ಶಿ ಹುದ್ದೆಯಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾಗಿ ಮುಂಬಡ್ತಿ ಪಡೆದ ೫೨೮ ಸಿಬ್ಬಂದಿಗೆ ನಿಷ್ಠೆ, ದಕ್ಷತೆ ಮತ್ತು ಪ್ರಾಮಾಣಿಕತೆಯ ಪ್ರತಿಜ್ಞಾವಿಧಿ ಬೋಧಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ಮಳೆಯ ಕೊರತೆಯಾಗಿದ್ದು, ಯಾರೊಬ್ಬರೂ ಗುಳೆ ಹೋಗಬಾರದು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ರಾಜ್ಯ ಸರ್ಕಾರಕ್ಕೆ ಆರ್ಥಿಕ ಹೊರೆಯಾದರೂ ವಿಬಿಜಿ ರಾಮ್ ಜಿ ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಉತ್ತಮ ಗುಣಮಟ್ಟದ ಆಸ್ತಿಯನ್ನು ಸೃಜಿಸಲು ಮತ್ತು ಬಡ, ಶೋಷಿತ ಜನರಿಗೆ ಉದ್ಯೋಗ ನೀಡಲು ಶ್ರಮಿಸುವಂತೆ ಸೂಚಿಸಿದ್ದಾರೆ.

ಅಂತರ್ಜಲಮಟ್ಟ ಹೆಚ್ಚಳ, ಕೊಟ್ಟಿಗೆ ನಿರ್ಮಾಣ, ರಸ್ತೆ ನಿರ್ಮಾಣ, ಕಾಲುವೆ ನಿರ್ಮಾಣ ಸೇರಿದಂತೆ ೩೧೮ ಕಾಮಗಾರಿಗಳನ್ನು ಕೈಗೊಳ್ಳಲು ವಿಬಿಜಿ ರಾಮ್ ಜಿ ಅಡಿಯಲ್ಲಿ ಅವಕಾಶವಿದೆ. ಈ ಮಾಸಾಂತ್ಯದೊಳಗೆ ವಿಬಿಜಿ ರಾಮ್ ಜಿ ಅಡಿಯಲ್ಲಿ ಕನಿಷ್ಠ ೫ರಿಂದ ೬ ಲಕ್ಷ ಮಾನವ ದಿನ ಸೃಜನೆ ಮಾಡುವ ಗುರಿ ಇಟ್ಟುಕೊಂಡು ಕಾರ್ಯ ನಿರ್ವಹಿಸಬೇಕು. ಗ್ರಾಮಗಳ ನೈರ್ಮಲ್ಯಕ್ಕೂ ಹೆಚ್ಚಿನ ಆದ್ಯತೆ ನೀಡಬೇಕು ಸಲಹೆ ನೀಡಿದ್ದಾರೆ.

**<><*<><>*><**

ಚಾಮರಾಜನಗರ ಜಿಲ್ಲೆಯ ಹನೂರು ಗುಂಡಿನ ದಾಳಿ ಪ್ರಕರಣವನ್ನು ಸಿಐಡಿ ತನಿಖೆಗೆ ವರ್ಗಾಯಿಸಿ ಸರ್ಕಾರ ಆದೇಶ ಹೊರಡಿಸಿದೆ. ಪ್ರಕರಣದ ಕಡತಗಳನ್ನು ಸಿಐಡಿ ತನಿಖಾಧಿಕಾರಿಗೆ ಹಸ್ತಾಂತರಿಸುವಂತೆ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಮುತ್ತುರಾಜ್ ಅವರಿಗೆ ಸೂಚಿಸಿದ್ದಾರೆ. ಜಿಲ್ಲೆಯ ರಾಮಾಪುರ, ಹನೂರು ಮತ್ತು ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ

ನಾಲ್ಕು ಪ್ರಕರಣಗಳು, ಕಳ್ಳಬೇಟೆ ಶಿಬಿರಗಳ ಧ್ವಂಸ, ಜೀಪ್ ಜಖಂ, ಸರ್ಕಾರಿ ಆಸ್ತಿ ನಷ್ಟ, ಕಾಡಿಗೆ ಬೆಂಕಿ ಪ್ರಕರಣಗಳನ್ನು ಹೆಚ್ಚಿನ ತನಿಖೆಗಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಸಿಐಡಿಗೆ ವರ್ಗಾಯಿಸಲಾಗಿದೆ. ಕಾವೇರಿ ವನ್ಯಜೀವಿಧಾಮದ ಹೊಳೆಮೂರ್ದಟ್ಟಿ ಅರಣ್ಯದಲ್ಲಿ ಆಗಸ್ಟ್ ೧೫ರ ಮುಂಜಾನೆ ಅರಣ್ಯ ಪ್ರದೇಶದಲ್ಲಿ ಬೇಟೆಗೆ ತೆರಳಿದ್ದರೆನ್ನಲಾದ ಮೂವರ ಮೇಲೆ ಅರಣ್ಯ ಇಲಾಖೆ ಅಧಿಕಾರಿಗಳು ಗುಂಡಿನ ದಾಳಿ ನಡೆಸಿದ್ದರು. ಈ ದಾಳಿಯಲ್ಲಿ ಮೂವರು ಮೃತಪಟ್ಟಿದ್ದರು.

**<><*<><>*><>**

ತೆರಿಗೆದಾರರ ಹಣದಿಂದ ಸಂಗ್ರಹಿಸಿದ ಅಕ್ಕಿಯನ್ನು ಎಥೆನಾಲ್ ಉತ್ಪಾದಕರಿಗೆ ಅದರ ಸ್ವಾಧೀನ ವೆಚ್ಚಕ್ಕಿಂತ ಸುಮಾರು ೪೦ ಪ್ರತಿಶತ ಕಡಿಮೆ ಬೆಲೆಗೆ ಮಾರಾಟ ಮಾಡುವ ಕೇಂದ್ರದ ನೀತಿಯನ್ನು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಅವರು, ಭಾರತದ ಎಥೆನಾಲ್ ಗಣಿತವೇ ಸರಿಯಾಗಿ ಹೊಂದಿಕೆಯಾಗುತ್ತಿಲ್ಲ ಎಂದು ವ್ಯಂಗ್ಯವಾಡಿದ್ದಾರೆ. ಆಹಾರ ಭದ್ರತೆಗಾಗಿ ಸರ್ಕಾರ ರೈತರಿಂದ ಭತ್ತ ಖರೀದಿಸುತ್ತಿದೆ. ಬಳಿಕ ಅದೇ ಅಕ್ಕಿಯನ್ನು ಎಥೆನಾಲ್ ಉತ್ಪಾದಕರಿಗೆ ಸ್ವಾಧೀನ ವೆಚ್ಚಕ್ಕಿಂತ ಶೇಕಡಾ ೪೦ ಕಡಿಮೆ ದರದಲ್ಲಿ ಮಾರಾಟ ಮಾಡುತ್ತಿರುವುದು ಸರಿಯಲ್ಲ ಎಂದು ತಿಳಿಸಿದ್ದಾರೆ. ಈ ವ್ಯವಸ್ಥೆಯಿಂದ ನಿಜವಾಗಿ ಲಾಭ ಪಡೆಯುತ್ತಿರುವವರು ಯಾರು ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ.

**<><*<><>*><>**

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದಲ್ಲಿ ಭಾಗಿಯಾಗಿರುವ ಆರೋಪ ಹೊತ್ತಿರುವ ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ, ಬಳ್ಳಾರಿ ಚಲೋ ನಡೆಸಲು ಬಿಜೆಪಿ ನಿರ್ಧರಿಸಿದೆ. ಹತ್ತು ದಿನಗಳ ಕಾಲ ೧೭೦ ಕಿಲೋಮೀಟರ್ ಪಾದಯಾತ್ರೆ ನಡೆಸುವುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಘೋಷಿಸಿದ್ದಾರೆ. ಬೆಂಗಳೂರಿನಲ್ಲಿಂದು ಪ್ರತಿಪಕ್ಷ ನಾಯಕ ಆರ್.ಅಶೋಕ, ಮೇಲ್ಮನೆ ಪ್ರತಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಲವು ನಾಯಕರೊಂದಿಗೆ ಜಂಟಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸೆಪ್ಟಂಬರ್ ೧ ರಿಂದ ೧೧ರವರೆಗೆ ರಾಯಚೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಯಲಿದೆ. ಪಾದಯಾತ್ರೆಗೆ ಜೆಡಿಎಸ್ ನಾಯಕರು ಸಂಪೂರ್ಣ ಬೆಂಬಲ ಸೂಚಿಸಿದ್ದಾರೆ. ಉದ್ಘಾಟನಾ ಸಮಾರಂಭಕ್ಕೆ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಎಚ್.ಡಿ.ಕುಮಾರಸ್ವಾಮಿ ಆಗಮಿಸುವುದಾಗಿ ತಿಳಿಸಿದ್ದಾರೆ.

**<><*<><>*><>**

ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆ ಧಾರಾಕಾರ ಮಳೆಯಾಗುತ್ತಿದೆ. ಭಾರೀ ಮಳೆಯಿಂದಾಗಿ ಮಡಿಕೇರಿಯಲ್ಲಿ ಸಾಮಾನ್ಯ ಜನಜೀವನ ವ್ಯತ್ಯಯವಾಗಿದೆ. ಮಳೆಯಿಂದಾಗಿ ಕಾಫಿ ಗಿಡದಲ್ಲಿನ ಫಸಲು ಉದುರತೊಡಗಿದ್ದು, ಬೆಳೆಗಾರರ ಆತಂಕಕ್ಕೆ ಕಾರಣವಾಗಿದೆ. ಮಳೆಯಿಂದಾಗಿ ಕಾವೇರಿ ನದಿಯಲ್ಲಿ ನೀರಿನ ಹರಿವು ಹೆಚ್ಚಾಗುತ್ತಲೇ ಇದ್ದು, ಭಾಗಮಂಡಲದಲ್ಲಿ ತ್ರಿವೇಣಿ ಸಂಗಮ ಮುಳುಗಡೆಯಾಗಿದೆ. ಈ ನಡುವೆ ಕೊಡಗಿನಲ್ಲಿ ಮೋಡ ಬಿತ್ತನೆ ಮಾಡಲಾಗುತ್ತಿಲ್ಲ ಎಂದು ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಮತ್ತು ವೀರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಪ್ರವಾದಿ ಮೊಹಮ್ಮದ್ ಅವರ ಜನ್ಮ ದಿನವನ್ನು ಸ್ಮರಿಸುವ ಪವಿತ್ರ ಹಬ್ಬ ಈದ್ ಮಿಲಾದ್‌ನ್ನು ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿಂದು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ೨೦೨೫ನೇ ಸಾಲಿನ ಸಾರ್ವತ್ರಿಕ ರಜಾ ದಿನಗಳ ಪಟ್ಟಿಯಲ್ಲಿ ಸರ್ಕಾರದ ಅಧಿಸೂಚನೆಯನ್ವಯ ಈಗಾಗಲೇ ಆಗಸ್ಟ್ ೨೫ರಂದು ಈದ್ ಮಿಲಾದ್ ಹಬ್ಬವನ್ನು ಆಚರಿಸುವ ಸಲುವಾಗಿ ಸಾರ್ವತ್ರಿಕ ರಜೆ ಘೋಷಿಸಲಾಗಿದೆ. ಆದರೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬದಲಾವಣೆ ತರಲಾಗಿದ್ದು, ನಾಳೆ ಎಂದಿನಂತೆ ಶಾಲಾ ಕಾಲೇಜುಗಳು ಸೇರಿದಂತೆ ಸರ್ಕಾರಿ ಕಚೇರಿಗಳು ಕಾರ್ಯ ನಿರ್ವಹಿಸಲಿವೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

**<><*<><>*><>**

ಕಬ್ಬು ಪೂರೈಸಿದ ರೈತರಿಗೆ ಸಕ್ಕರೆ ಕಾರ್ಖಾನೆಗಳಿಂದ ಪಾವತಿಸಬೇಕಾದ ಹೆಚ್ಚುವರಿ ಬಾಕಿ ಹಣವನ್ನು ಕೂಡಲೇ ಪಾವತಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಸಕ್ಕರೆ ಕಾರ್ಖಾನೆಗಳ ಮಾಲೀಕರಿಗೆ ಸೂಚನೆ ನೀಡಿದ್ದಾರೆ.

ಬಾಗಲಕೋಟೆ ಜಿಲ್ಲೆಯ ವಿವಿಧ ಸಕ್ಕರೆ ಕಾರ್ಖಾನೆಗಳ ಮಾಲೀಕರೊಂದಿಗೆ ಇಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಾದಾಮಿ ಶುಗರ್ಸ್, ಜೆಮ್ ಶುಗರ್ಸ್, ಜಮಖಂಡಿ ಶುಗರ್ಸ್ ಸೇರಿದಂತೆ ಹಲವು ಸಕ್ಕರೆ ಕಾರ್ಖಾನೆಗಳು ಪ್ರತಿ ಮೆಟ್ರಿಕ್ ಟನ್‌ಗೆ ಹೆಚ್ಚುವರಿಯಾಗಿ ನೀಡಬೇಕಾದ ಶೇಕಡಾ ೫೦ರ ಬಾಕಿ ಹಣವನ್ನು ರೈತರಿಗೆ ಪಾವತಿಸಬೇಕಾಗಿದೆ. ಈ ಹಣವನ್ನು ವಿಳಂಬ ಮಾಡದೆ ತ್ವರಿತವಾಗಿ ಪಾವತಿಸುವಂತೆ ನಿರ್ದೇಶನ ನೀಡಿದ್ದಾರೆ. ಮುಂಬರುವ ಕಬ್ಬು ನುರಿಸುವ ಹಂಗಾಮಿನಲ್ಲಿ ರೈತರಿಗೆ ಯಾವುದೇ ಗೊಂದಲ ಉಂಟಾಗದಂತೆ, ಪ್ರತಿಯೊಂದು ಸಕ್ಕರೆ ಕಾರ್ಖಾನೆ ಮಾಲೀಕರು ತಮ್ಮ ವ್ಯಾಪ್ತಿಯ ಕಬ್ಬು ಬೆಳೆಗಾರರ ಸಭೆ ಕರೆದು ಕಬ್ಬಿನ ದರವನ್ನು ನಿಗದಿಪಡಿಸಿದ ನಂತರವೇ ಕಬ್ಬು ನುರಿಸುವ ಕಾರ್ಯ ಆರಂಭಿಸಬೇಕು ಎಂದು ತಿಳಿಸಿದ್ದಾರೆ.

**<><*<><>*><>**

ನೈಸ್ ಯೋಜನೆಯನ್ನು ರಾಜ್ಯ ಸರ್ಕಾರ ಕೂಡಲೇ ವಶಪಡಿಸಿಕೊಳ್ಳುವಂತೆ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ನೇತೃತ್ವದಲ್ಲಿ ಜೆಡಿಎಸ್ ನಿಯೋಗ ಇಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಮನವಿ ಸಲ್ಲಿಸಿತು. ನೈಸ್ ಯೋಜನೆಯಲ್ಲಿ ನಡೆದಿರುವ ಬೃಹತ್ ಅಕ್ರಮ, ಒಪ್ಪಂದಗಳ ಸ್ಪಷ್ಟ ಉಲ್ಲಂಘನೆ ಹಾಗೂ ರೈತರಿಗೆ ಆಗಿರುವ ಅನ್ಯಾಯ ಖಂಡಿಸಿ ನಿಯೋಗ ಮನವಿ ಸಲ್ಲಿಸಿದೆ. ಬಳಿಕ ಮಾತನಾಡಿದ ಜೆಡಿಎಸ್ ಮುಖಂಡ ಸುರೇಶ್ ಬಾಬು, ನೈಸ್ ರಸ್ತೆಯಲ್ಲಿ ಹೈಕೋರ್ಟ್ ಟೋಲ್ ಸಂಗ್ರಹ ಮಾಡಬಾರದು ಎಂದು ಸೂಚಿಸಿದೆ. ಆದರೂ, ಟೋಲ್ ಸಂಗ್ರಹ ನಿಲ್ಲಿಸಿಲ್ಲ. ಈ ಕುರಿತಂತೆ ರಾಜ್ಯಪಾಲರಿಗೂ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ರೈಲ್ವೆ ಹಳಿಗಳ ಪಕ್ಕದ ಪ್ರದೇಶವನ್ನು ಪರಿಣಾಮಕಾರಿಯಾಗಿ ಸ್ವಚ್ಛಗೊಳಿಸಿ, ನಿರಂತರವಾಗಿ ಸ್ವಚ್ಛತೆ ಕಾಪಾಡಿಕೊಳ್ಳುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ರೈಲ್ವೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರು ನಗರದಾದ್ಯಂತ "ತ್ಯಾಜ್ಯದಿಂದ ಸ್ವಾತಂತ್ರ್ಯ" ಅಭಿಯಾನದಡಿ ಬೃಹತ್ ಸ್ವಚ್ಛತಾ ಕಾರ್ಯ ಹಮ್ಮಿಕೊಳ್ಳಲಾಗಿದ್ದು, ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಅವರು ಪರಿಶೀಲನೆ ನಡೆಸಿದರು. ಬಳ್ಳಾರಿ ರಸ್ತೆಯ ಯಲಹಂಕ ರೈಲ್ವೆ ಕೆಳಸೇತುವೆ ಬಳಿ ಪರಿಶೀಲನೆ ನಡೆಸಿ, ರೈಲ್ವೆ ಹಳಿ ಪಕ್ಕದಲ್ಲಿನ ಕಟ್ಟಡ ಭಗ್ನಾವಶೇಷಗಳನ್ನು ಕೂಡಲೇ ತೆರವುಗೊಳಿಸುವಂತೆ ಸೂಚಿಸಿದ್ದಾರೆ.

**<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ ><><<>**